# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ವಿಧಾನ ಪರಿಷತ್ತಿನ ಸದಸ್ಯರ ಹೆಸರು: | ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 1750 |
| ಉತ್ತರಿಸಬೇಕಾದ ದಿನಾಂಕ: | 14-03-2022 |
| ಉತ್ತರಿಸುವ ಸಚಿವರು: | ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ನೀಟ್ ಯುಜಿ ಕೌನ್ಸಿಲಿಂಗ್‌ನಲ್ಲಿ (Neet UG Connseling) ರಾಜ್ಯದ ಹಲವು ಪ್ರತಿಷ್ಠ ಡೀಮ್ಡ್ ವೈದ್ಯಕೀಯ ವಿಶ್ವವಿದ್ಯಾಲಯಗಳಲ್ಲಿ ಸರ್ಕಾರಿ ಕೋಟಾದ ಸೀಟಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನಿಗದಿಪಡಿಸಿದ ಶುಲ್ಕದ ಮೊತ್ತಕ್ಕಿಂತ ದುಬಾರಿ ಶುಲ್ಕ ಪಾವತಿಸುವಂತೆ ವಿದ್ಯಾರ್ಥಿಗಳಿಗೆ ಕಾಲೇಜುಗಳು ಒತ್ತಾಯಿಸುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರದ ಕ್ರಮವೇನು; (ವಿವರ ನೀಡುವುದು) | ನೀಟ್ ಯುಜಿ ಕೌನ್ಸಿಲಿಂಗ್‌ನಲ್ಲಿ ರಾಜ್ಯದ ಪ್ರತಿಷ್ಠಿತ ಡೀಮ್ಡ್ ವೈದ್ಯಕೀಯ ವಿಶ್ವವಿದ್ಯಾಲಯಗಳು ಈ ಕೆಳಕಂಡಂತಿವೆ.<br>1. KLE Jawaharlal Nehru Medical College, Belagavi.<br>2. KLE Jagadguru Gangadhar Mahaswamigalu Mooru Savirmath Medical College, Hubballi<br>ಸದರಿ ಕಾಲೇಜುಗಳಲ್ಲಿ ಸರ್ಕಾರವು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ತಿಳಿಸಿದ್ದ ಶುಲ್ಕಕ್ಕಿಂತ ಹೆಚ್ಚುವರಿ ಶುಲ್ಕವನ್ನು ಪಾವತಿಸುವಂತೆ ಒತ್ತಾಯಿಸುತ್ತಿರುವುದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ಸದರಿ ದುಬಾರಿ ಶುಲ್ಕ ಪಾವತಿಸಲು ಅನೇಕ ಬಡ ಕುಟುಂಬದ ವಿದ್ಯಾರ್ಥಿಗಳಿಗೆ ಆರ್ಥಿಕವಾಗಿ ತೊಂದರೆಯಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು; (ವಿವರ ನೀಡುವುದು) | ಇಲ್ಲ. |
| ಇ) | ಈ ಸಂಬಂಧ ಸರ್ಕಾರಕ್ಕೆ ದೂರುಗಳು ಸಲ್ಲಿಕೆಯಾಗಿವೆಯೇ; ಹಾಗಿದ್ದಲ್ಲಿ, ಒಟ್ಟು ಎಷ್ಟು ದೂರುಗಳು ಸಲ್ಲಿಕೆಯಾಗಿವೆ ಮತ್ತು ಸರ್ಕಾರದ ಕ್ರಮವೇನು; (ವಿವರ ನೀಡುವುದು) | ಕೆ.ಎಲ್.ಇ- ಜೆ.ಎನ್.ಎಂ.ಸಿ., ಬೆಳಗಾವಿ ಮತ್ತು ಕೆ.ಎಲ್.ಇ- ಜೆ.ಜಿ.ಎಂ.ಎಂ.ಎಸ್., ಹುಬ್ಬಳ್ಳಿ ವೈದ್ಯಕೀಯ ಕಾಲೇಜುಗಳ ವಿದ್ಯಾರ್ಥಿಗಳಿಂದ ಸುಮಾರು 20 ದೂರುಗಳು ಬಂದಿರುತ್ತವೆ. ದೂರುಗಳ ಬಗ್ಗೆ ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿದೆ. |

| | | |
|---|---|---|
| ಈ) | ರಾಜ್ಯದ ಖಾಸಗಿ ಡೀಮ್ಡ್ ವೈದ್ಯಕೀಯ ಕಾಲೇಜುಗಳಲ್ಲಿ ಸರ್ಕಾರಿ ಕೋಟಾದ ಸೀಟಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನಿಗಧಿಪಡಿಸಿದ ಶುಲ್ಕದ ಮೊತ್ತವನ್ನು ಅನುಸರಿಸಲು ಒಪ್ಪಂದವಾಗಿರುವ ಕುರಿತು ಸರ್ಕಾರದ ನಿಲುವೇನು?(ವಿವರ ನೀಡುವುದು) | ಸರ್ಕಾರವು ವೈದ್ಯಕೀಯ ಕೋರ್ಸ್‌ಗೆ ಶುಲ್ಕವನ್ನು ಆದೇಶದ ಮೂಲಕ ನಿಗಧಿಪಡಿಸುತ್ತದೆ. ಅದರಂತೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಕೌನ್ಸಿಲಿಂಗ್ ಮೂಲಕ ವೈದ್ಯಕೀಯ ಕೋರ್ಸ್‌ಗೆ ಪ್ರವೇಶ ಪ್ರಕ್ರಿಯೆಯನ್ನು ನಡೆಸುತ್ತದೆ. |

No: MED 30 RGU 2022

(ಡಾ:ಕೆ.ಸುಧಾಕರ್)
ವೈದ್ಯಕೀಯ ಶಿಕ್ಷಣ ಹಾಗೂ ಆರೋಗ್ಯ
ಮತ್ತು ಕುಟುಂಬ ಕಲ್ಯಾಣ ಇಲಾಖಾ ಸಚಿವರು